ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 31/1/2020

# 27 ಮಾಜಿ ಸಚಿವರ ಸರ್ಕಾರಿ ಭದ್ರತೆ ವಾಪಸ್

ಉವಾ 31/1/20

**ಬೆಂಗಳೂರು:** ರಾಜ್ಯ ಸರ್ಕಾರದ ವತಿಯಿಂದ 27 ಮಾಜಿ ಸಚಿವರಿಗೆ ನೀಡಲಾಗಿದ್ದ ಸರ್ಕಾರಿ ಭದ್ರತೆ ವಾಪಸ್ ಪಡೆಯಲಾಗಿದ್ದು, ಅಂಗರಕ್ಷಕ ಮತ್ತು ಭದ್ರತೆ ಎರಡೂ ರದ್ದುಪಡಿಸಲಾಗಿದೆ. ಮಾಜಿ ಸಚಿವರಾದ ಆರ್.ವಿ.ದೇಶಪಾಂಡೆ, ಜಿ.ಟಿ.ದೇವೇಗೌಡ, ಬಂಡೆಪ್ಪ ಕಾಶೆಂಪೂರ್, ಸತೀಶ್ ಜಾರಕಿಹೊಳಿ, ಜಮೀರ್ ಅಹಮದ್ ಖಾನ್, ಆರ್.ಬಿ.ತಿಮ್ಮಾಪುರ, ರಹೀಂ ಖಾನ್, ಟಿ.ಪಿ.ಪರಮೇಶ್ವರ್ ನಾಯಕ್, ಡಿ.ಸಿ.ತಮ್ಮಣ್ಣ, ಕೃಷ್ಣಬೈರೇಗೌಡ, ಎಂ.ಸಿ.ಮನಗೂಳಿ, ಎನ್.ಎಚ್.ಶಿವಶಂಕರರೆಡ್ಡಿ, ರಮೇಶ್ ಜಾರಕಿಹೊಳಿ, ಗುಬ್ಬಿ ಶ್ರೀನಿವಾಸ್, ವೆಂಕಟರಾವ್ ನಾಡಗೌಡ, ಸಿ.ಎಸ್. ಪುಟ್ಟರಾಜು, ಪ್ರಿಯಾಂಕ್ ಖರ್ಗೆ, ಯು.ಟಿ.ಖಾದರ್, ಸಾ.ರಾ.ಮಹೇಶ್, ಎನ್.ಮಹೇಶ್, ಶಿವಾನಂದ ಪಟೀಲ್, ವೆಂಕಟರಮಣಪ್ಪ, ರಾಜಶೇಖರ್ ಪಾಟೀಲ್, ಸಿ.ಪುಟ್ಟರಂಗಶೆಟ್ಟಿ, ಆರ್.ಶಂಕರ್, ಜಯಮಾಲಾ ಅವರಿಗೆ ಒದಗಿಸಲಾಗಿದ್ದ ಅಂಗರಕ್ಷಕ ಮತ್ತು ನಿವಾಸದ ಗಾರ್ಡ್ ಭದ್ರತೆಯನ್ನು ಈ ತಕ್ಷಣದಿಂದ ವಾಪಸ್ ಪಡೆಯಲು ಸಿಎಆರ್ ಪಶ್ಚಿಮ ವಿಭಾಗದ ಉಪ ಪೊಲೀಸ್ ಆಯುಕ್ತರಿಗೆ ನಗರ ಪೊಲೀಸ್ ಆಯುಕ್ತ ಭಾಸ್ಕರ್‌ರಾವ್ ನಿರ್ದೇಶನ ನೀಡಿದ್ದಾರೆ. ಆದರೆ, ಎ ಶ್ರೇಣಿಯಲ್ಲಿ ಮಾಜಿ ಸಚಿವ ಡಿ.ಕೆ.ಶಿವಕುಮಾರ್, ಕೆ.ಜೆ.ಜಾರ್ಜ್, ಎಂ.ಬಿ.ಪಾಟೀಲ್, ಡಾ.ಜಿ.ಪರಮೇಶ್ವರ್, ಎಚ್.ಡಿ.ರೇವಣ್ಣ ಅವರ ಭದ್ರತೆ ಯಥಾಸ್ಥಿತಿ ಮುಂದುವರಿದಿದೆ. ಇದು ಜ.22 ರಿಂದಲೇ ಅನ್ವಯವಾಗಿದೆ.